## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದಲ್ಲಿನ ತೀವ್ರ ಬರ ಪರಿಸ್ಥಿತಿಯನ್ನು ನಿಭಾಯಿಸಲು ಉಪಯುಕ್ತ ಕೆರೆಗಳ ಹೂಳೆತ್ತಲು ರೂಪಿಸಿರುವ ಕೆರೆ ಸಂಜೀವಿನಿ ಕಾರ್ಯಕ್ರಮದ ಉಸ್ತುವಾರಿ ಸಮಿತಿ ರಚಿಸುವ ಕುರಿತು.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:61:ಆರ್‌ಆರ್‌ಸಿ:2016, ದಿನಾಂಕ:2-5-2016.
2. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ:61:ಆರ್‌ಆರ್‌ಸಿ:16, ದಿನಾಂಕ:5-5-2016, 10-5-2016 & 18-5-2016.

**ಪ್ರಸ್ತಾವನೆ:**

ರಾಜ್ಯದಲ್ಲಿ ಬಹುತೇಕ ಜಿಲ್ಲೆಗಳಲ್ಲಿ ತೀವ್ರವಾದ ಬರವಿರುವುದರಿಂದ ಬಹುತೇಕ ಜಲಮೂಲಗಳಲ್ಲಿ ಸಂಗ್ರಹಣೆ ಕುಸಿತಗೊಂಡು ಸಾಕಷ್ಟು ಕಡೆ ಜನ ಹಾಗೂ ಜಾನುವಾರುಗಳಿಗೆ ನೀರಿನ ಸಮಸ್ಯೆ ಉದ್ಭವಿಸಿರುತ್ತದೆ. ಅದರಲ್ಲಿಯೂ ಕುಡಿಯುವ ನೀರಿನ ಪ್ರಮುಖ ಮೂಲವಾದ ಮಹತ್ವದ ಕೆರೆಗಳು ಬತ್ತಿಹೋಗಿರುವುದು ಸಮಸ್ಯೆಯನ್ನು ಜಟಿಲಗೊಳಿಸಿದೆ. ಈ ಸನ್ನಿವೇಶದಲ್ಲಿ ಉಪಯುಕ್ತ ಕೆರೆಗಳ ಹೂಳೆತ್ತುವ ಕೆಲಸವನ್ನು ಆದ್ಯತೆ ಮೇಲೆ ತೆಗೆದುಕೊಂಡು ಮಳೆಗಾಲ ಪ್ರಾರಂಭವಾಗುವ ಮುನ್ನವೇ ಪ್ರಾರಂಭಿಸಿದಲ್ಲಿ ಮಾತ್ರ ಮಳೆಗಾಲದಲ್ಲಿ ಕೆರೆಗಳಿಗೆ ನೀರು ಸಂಗ್ರಹಣೆಗೊಂಡು ಕೆರೆ ನೀರಿನ ಸಂಗ್ರಹಣಾ ಸಾಮರ್ಥ್ಯ ವೃದ್ಧಿಯಾಗುತ್ತದೆ ಮತ್ತು ಬರಗಾಲವನ್ನು ಸಮರ್ಥವಾಗಿ ನಿಭಾಯಿಸಲು ಸಾಧ್ಯವಾಗುತ್ತದೆ.

ಈ ನಿಟ್ಟಿನಲ್ಲಿ ಕೆರೆ ಸಂಜೀವಿನಿ ಯೋಜನೆಯನ್ನು ಮೇಲೆ ಓದಲಾದ ಆದೇಶದಂತೆ ರೂಪಿಸಿದ್ದು, ಸದರಿ ಯೋಜನೆಯನ್ನು ತುರ್ತಾಗಿ 2 ತಿಂಗಳ ಕಾಲಮಿತಿಯಲ್ಲಿ ಅನುಷ್ಠಾನಗೊಳಿಸಲು ಮಾರ್ಗಸೂಚಿಗಳನ್ನು ನೀಡಲಾಗಿರುತ್ತದೆ.

ಈ ಕಾರ್ಯಕ್ರಮವನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಹಾಗೂ ಉಸ್ತುವಾರಿ ಮಾಡಲು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲು ಸರ್ಕಾರವು ತೀರ್ಮಾನಿಸಿರುತ್ತದೆ.

ಆದ್ದರಿಂದ ಈ ಆದೇಶ,

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:61:ಆರ್‌ಆರ್‌ಸಿ:2016, ಬೆಂಗಳೂರು, ದಿನಾಂಕ:20-6-2016.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ರಾಜ್ಯದಲ್ಲಿನ ತೀವ್ರ ಬರ ಪರಿಸ್ಥಿತಿಯನ್ನು ನಿಭಾಯಿಸಲು ಉಪಯುಕ್ತ ಕೆರೆಗಳ ಹೂಳೆತ್ತಲು ರೂಪಿಸಿರುವ ಕೆರೆ ಸಂಜೀವಿನಿ ಯೋಜನೆಯನ್ನು ಶೀಘ್ರವಾಗಿ ಮತ್ತು ಸಮರ್ಪಕವಾಗಿ ಅನುಷ್ಠಾನಗೊಳಿಸುವ ಕುರಿತು ಹಾಗೂ ಮೇಲ್ವಿಚಾರಣೆಯೊಂದಿಗೆ ಉಸ್ತುವಾರಿ ಮಾಡಲು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ಈ ಕೆಳಕಂಡ ಸದಸ್ಯರುಗಳನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿದೆ.

| | | |
|---|---|---|
| 1 | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,<br>ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ | ಅಧ್ಯಕ್ಷರು |
| 2 | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,<br>ಆರ್ಥಿಕ ಇಲಾಖೆ | ಸದಸ್ಯರು |
| 3 | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,<br>ಜಲ ಸಂಪನ್ಮೂಲ ಇಲಾಖೆ | ಸದಸ್ಯರು |
| 4 | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,<br>ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) | ಸದಸ್ಯರು |
| 5 | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,<br>ಯೋಜನಾ ಇಲಾಖೆ | ಸದಸ್ಯರು |
| 6 | ಸರ್ಕಾರದ ಕಾರ್ಯದರ್ಶಿಗಳು,<br>ಕೃಷಿ ಇಲಾಖೆ | ಸದಸ್ಯರು |
| 7 | ಸರ್ಕಾರದ ಕಾರ್ಯದರ್ಶಿಗಳು ಜಲ ಸಂಪನ್ಮೂಲ ಇಲಾಖೆ<br>(ಸಣ್ಣ ನೀರಾವರಿ) | ಸದಸ್ಯರು |
| 8 | ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ,<br>ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ | ಸದಸ್ಯರು |
| 9 | ಮುಖ್ಯ ಇಂಜಿನಿಯರ್, ಪಂ.ರಾ.ಇಂ. ಇಲಾಖೆ | ಸದಸ್ಯರು |
| 10 | ಮುಖ್ಯ ಇಂಜನಿಯರ್, ಸಣ್ಣ ನೀರಾವರಿ ಇಲಾಖೆ | ಸದಸ್ಯರು |
| 11 | ಮುಖ್ಯ ಇಂಜನಿಯರ್, ಗ್ರಾಮೀಣ ಕುಡಿಯುವ ನೀರು<br>ಸರಬರಾಜು, ಗ್ರಾ. ಅ ಮತ್ತು ಪಂ.ರಾಜ್ ಇಲಾಖೆ | ಸದಸ್ಯರು |
| 12 | ನಿರ್ದೇಶಕರು, ಸುವರ್ಣ ಗ್ರಾಮೋದಯ,<br>ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ | ಸದಸ್ಯ<br>ಕಾರ್ಯದರ್ಶಿ |

ಮೇಲ್ಕಂಡ ಸಮಿತಿಯು ಕೆರೆ ಸಂಜೀವಿನಿ ಯೋಜನೆಯಡಿ ಅನುಷ್ಠಾನಗೊಳಿಸಿದ ಕಾರ್ಯಕ್ರಮಗಳ ಪ್ರಗತಿ ಪರಿಶೀಲನೆ, ಮೇಲ್ವಿಚಾರಣೆಯೊಂದಿಗೆ ಉಸ್ತುವಾರಿ ಮಾಡುವುದು ಹಾಗೂ ಶೀಘ್ರ ಮತ್ತು ಸಮರ್ಪಕ ಅನುಷ್ಠಾನ ಕುರಿತಂತೆ ಸೂಕ್ತ ಸಲಹೆ-ಸೂಚನೆಗಳನ್ನು ನೀಡುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

20/6/16

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು:

1. ಮಾನ್ಯ ಮುಖ್ಯ ಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.

2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿರವರಿಗೆ, ವಿಧಾನಸೌಧ, ಬೆಂಗಳೂರು.
3. ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ರವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ರವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ರವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ, ಕಟ್ಟಡ, ಬೆಂಗಳೂರು ರವರ ಆಪ್ತ ಕಾರ್ಯದರ್ಶಿಗಳು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ರವರ ಆಪ್ತ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ರವರ ಆಪ್ತ ಕಾರ್ಯದರ್ಶಿಗಳು, ಜಲಸಂಪನ್ಮೂಲ ಇಲಾಖೆ, ವಿಕಾಸ ಸೌಧ. ಬೆಂಗಳೂರು.
10. ಸರ್ಕಾರದ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ), ಬಹುಮಹಡಿ ಕಟ್ಟಡ, ಬೆಂಗಳೂರು.
11. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
12. ಸಂಬಂಧಿಸಿದ ಎಲ್ಲಾ ಜಿಲ್ಲಾಧಿಕಾರಿಗಳಿಗೆ.
13. ಸಂಬಂಧಿಸಿದ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
14. ಮುಖ್ಯ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, 2ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು-9.
15. ಮುಖ್ಯ ಇಂಜಿನಿಯರ್, ಜಲ ಸಂಪನ್ಮೂಲ ಇಲಾಖೆ, ಬೆಂಗಳೂರು.
16. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ, ಕಾವೇರಿ ಭವನ, ಬೆಂಗಳೂರು.
17. ಸಂಬಂಧಿಸಿದ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಕಾರ್ಯಪಾಲಕ ಅಭಿಯಂತರರುಗಳಿಗೆ.
18. ವೆಬ್‌ಸೈಟ್/ಮಾಹಿತಿ ಕೇಂದ್ರ-(10 ಪ್ರತಿಗಳು), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ. ಬಹುಮಹಡಿ ಕಟ್ಟಡ, ಬೆಂಗಳೂರು.
19. ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.